# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 537 (648)

ಸದಸ್ಯರ ಹೆಸರು : ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರ)

ಉತ್ತರಿಸ ಬೇಕಾದ ದಿನಾಂಕ : 11.12.2023

ಉತ್ತರಿಸಬೇಕಾದ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವೇ ವೃತ್ತಿ ಶಿಕ್ಷಣವನ್ನು ಮುಚ್ಚಿದ್ದು, ಎಲ್ಲರಿಗೂ ಒಂದೇ ನ್ಯಾಯ ಒಂದೇ ಕಾನೂನು ಮಾಡದೇ ಇರುವುದಕ್ಕೆ ಕಾರಣವೇನು? | ಕರ್ನಾಟಕ ರಾಜ್ಯದಲ್ಲಿನ ಪದವಿ ಪೂರ್ವ ಶಿಕ್ಷಣದಲ್ಲಿರುವ ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ ಸಂಖ್ಯೆ:ಸಂವ್ಯಶಾಇ 22 ಶಾಸನ 2011, ದಿನಾಂಕ:06.04.2011 ರಂದು ಜಾರಿಗೆ ಬಂದಿದ್ದು, ಈ ವಿಧೇಯಕದಲ್ಲಿ ವಿಧಿಸಿರುವ ಷರತ್ತುಗಳ ಆಧಾರದ ಮೇಲೆ ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಉಪನ್ಯಾಸಕರನ್ನು ವಿಲೀನ ವಿಧೇಯಕದನ್ವಯ ದಿನಾಂಕ:06.04.2011ಕ್ಕೆ ನಿರಂತರವಾಗಿ 05 ವರ್ಷಗಳ ಸೇವೆ ಸಲ್ಲಿಸಿರುವ ನೌಕರರುಗಳನ್ನು ವಿವಿಧ ಇಲಾಖೆಗಳಲ್ಲಿ ವಿಲೀನಗೊಳಿಸಲಾಗಿದೆ. ವಿಲೀನಗೊಂಡ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರನು ಕರ್ತವ್ಯಕ್ಕೆ ಹಾಜರಾದ ನಂತರ, ಈ ಅಧಿನಿಯಮದ ಅಡಿಯಲ್ಲಿ ಆತನ ಪ್ರಾರಂಭಿಕ ಮೂಲ ವೇತನವನ್ನು, ಆತನು ವಿಲೀನಗೊಂಡ ಹುದ್ದೆಯ ಪ್ರವರ್ಗದ ಕಾಲಿಕ ವೇತನ ಶ್ರೇಣಿಯ ಕನಿಷ್ಟಕ್ಕೆ ನಿಗಧಿಗೊಳಿಸತಕ್ಕದ್ದು ಹಾಗೂ ತನ್ನ ವಿಲೀನಕ್ಕೆ ಮೊದಲು ಸಲ್ಲಿಸಿದ ಸೇವೆಯನ್ನು ವೇತನ, ಜೇಷ್ಠತೆ ಹಾಗೂ ರಜೆ ಅಥವಾ ಪಿಂಚಣಿಗೆ ಸಂಬಂಧಿಸಿದಂತೆ ಲೆಕ್ಕಕ್ಕೆ ತೆಗದುಕೊಳ್ಳತಕ್ಕದಲ್ಲ ಎಂಬ ಷರತ್ತು ವಿಧಿಸಲಾಗಿದೆ. |
| ಆ) | ವಿಲೀನಾತಿಯಿಂದ ದುರವಿರುವ ನೌಕರರಿಗೆ ಸರ್ಕಾರದಿಂದ ದೊರೆತಿರುವ ಪರಿಹಾರವೇನು ? | ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸಗಳ ನೌಕರರನ್ನು ವಿಲೀನಗೊಳಿಸುವ ಅಧಿನಿಯಮ 2011ರ ಅಧಿಸೂಚನೆ ಸಂ: ಸಂವ್ಯಶಾಇ22: ಶಾಸನ2011: ಬೆಂಗಳೂರು, ದಿನಾಂಕ: 06.04.2011ರನ್ವಯ ವಿಲೀನಗೊಳಿಸಲಾಗಿದೆ. |
| ಇ) | ಸೂಕ್ತ ಕ್ರಮಕ್ಕಾಗಿ ಮತ್ತೊಂದು ಬಾರಿ ವಿಲೀನಾತಿ ನೀಡಿ ಅವಕಾಶ ವಂಚಿತ ಸಿಬ್ಬಂದಿಯ ವಿಲೀನಾತಿಗಾಗಿ ಸರ್ಕಾರ ತೆಗೆದುಕೊಂಡ ಕ್ರಮವೇನು? | ಕರ್ನಾಟಕ ರಾಜ್ಯದಲ್ಲಿನ ಪದವಿ ಪೂರ್ವ ಶಿಕ್ಷಣದಲ್ಲಿರುವ ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ ಸಂಖ್ಯೆ:ಸಂವ್ಯಶಾಇ 22 ಶಾಸನ 2011, ದಿನಾಂಕ:06.04.2011 ರಂದು ಜಾರಿಗೆ ಬಂದಿದ್ದು, ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ವಿಲೀನಗೊಳಿಸುವ ಅಧಿನಿಯಮ 2011ರ ನಿಯಮ-3ರಲ್ಲಿ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರುಗಳನ್ನು ಒಂದು ಸಲದ |

| | | |
|---|---|---|
| | | ಕ್ರಮವಾಗಿ ವಿಲೀನಗೊಳಿಸಲು ಪರಿಗಣಿಸಲಾಗಿದೆ.<br><br>ಮಾನ್ಯ ಸುಪ್ರೀಂಕೋರ್ಟ್ ಅಪೀಲು (ಸಿವಿಲ್) 3595-3612/1999 ದಿನಾಂಕ:10.04.2006ರ ರಾಜ್ಯ ಸರ್ಕಾರ ಮತ್ತು ಇತರರು ವಿರುದ್ಧ ಉಮಾದೇವಿ ಮತ್ತು ಇತರರು ಪ್ರಕರಣದಲ್ಲಿ ಒಂದು ಬಾರಿ ಕ್ರಮವಾಗಿ ಕ್ರಮಬದ್ಧಗೊಳಿಸಲು ಅವಕಾಶ ನೀಡಿ ಆದೇಶಿಸಿದ್ದು, ಅಂತಹ ವಿಲೀನ/ಕ್ರಮಬದ್ಧಗೊಳಿಸುವಿಕೆಯ ನಿಯಮಗಳನ್ನು ಮತ್ತೊಮ್ಮೆ ಯಾವುದೇ ತಿದ್ದುಪಡಿ ಮಾಡಬಾರದೆಂದು ಸ್ಪಷ್ಟ ನಿರ್ದೇಶನ ನೀಡಿರುವುದರಿಂದ, ಸದರಿ ಅಧಿನಿಯಮಕ್ಕೆ ತಿದ್ದುಪಡಿ ತರುವುದು ಘನ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನಗಳಿಗೆ ವ್ಯತಿರಿಕ್ತವಾಗುತ್ತದೆ. ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕ-2011ನ್ನು ಪುನಃ ತೆರೆಯಲು ಮತ್ತು ತಿದ್ದುಪಡಿ ಮಾಡಿ ಅವರ ಖಾಯಂ ಪೂರ್ವ ಸೇವೆಯನ್ನು ಪರಿಗಣಿಸಿ, ನಿಶ್ಚಿತ ಪಿಂಚಣಿ ನೀಡಲು ಹಾಗೂ ಅವರ ಹಿಂದಿನ ಅರ್ಹತೆಯನ್ನು ಪರಿಗಣಿಸಲು ಅವಕಾಶವಿರುವುದಿಲ್ಲ. |
| ಈ) | 5 ವರ್ಷ ಸೇವೆ ಸಲ್ಲಿಸದ ನೌಕರರ ಸಮಸ್ಯೆ ಬಗೆಹರಿಸಲು ಮತ್ತೊಂದು ಪರಿಹಾರವನ್ನು ಸರ್ಕಾರ ಕೈಗೊಳ್ಳದಿರಲು ಕಾರಣವೇನು? | ಉದ್ಭವಿಸುವುದಿಲ್ಲ |
| ಉ) | 5 ವರ್ಷ ಸೇವೆ ಸಲ್ಲಿಸದ ನೌಕರರ ವಿಲೀನಾತಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ಉದ್ಭವಿಸುವುದಿಲ್ಲ. |

**ಸಂಖ್ಯೆ:ಇಪಿ 47 ಟಿವಿಇ 2023**

**(ಎಸ್.ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು